ಈ) ೧೯೯೦-೯೧ರ ಸಾಲಿನಲ್ಲಿ ಮೈಸೂರು ಮೃಗಾಲಯದ ಪ್ರಾಣಿಗಳ ಕೊಠಡಿಗಾಗಿ ಹಾಗೂ ಇನ್ನಿತರ ಕಾಮಗಾರಿಗಳಿಗಾಗಿ ರೂ. ೨೨.೬೦,೫೦೦-೦೦ಗಳನ್ನು ಆಯವ್ಯಯದಲ್ಲಿ ಒದಗಿಸಲಾಗಿದೆ.

ರಾಜ್ಯ ಸರ್ಕಾರದ ವತಿಯಿಂದ ಟೆಲಿ ಫಿಲಂಗಳನ್ನು ತಯಾರಿಸುವ ಕುರಿತು

೫೦೯. ಶ್ರೀ ಎ. ಕೃಷ್ಣಪ್ಪ (ವರ್ತೂರು).— ಮಾನ್ಯ ಗ್ರಾಮೀಣ ಅಭಿವೃದ್ಧಿ, ಪಂಚಾಯತ್ ರಾಜ್ ಮತ್ತು ವಾರ್ತಾ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ನಮ್ಮ ರಾಜ್ಯದಲ್ಲಿರುವ ಐತಿಹಾಸಿಕ ಸ್ಥಳಗಳ ಹಾಗೂ ರಾಜಮನೆತನಗಳ ಬಗ್ಗೆ ಟೆಲಿಫಿಲಂಗಳನ್ನು ಮಾಡಲು ಸರ್ಕಾರವು ಆಲೋಚನೆ ಮಾಡಿದೆಯೇ ?

ಆ) ನಮ್ಮ ರಾಜ್ಯದ ಹಿಂದಿನ ಕವಿಗಳು-ಕಲಾವಿದರಂಗಳ ಜೀವನ ಚಿತ್ರವನ್ನು ದೂರದರ್ಶನದಲ್ಲಿ ಬಿಂಬಿಸಲು ಟೆಲಿ ಫಿಲಂಗಳನ್ನು ತಯಾರಿಸಲು ಸರ್ಕಾರವು ಉದ್ದೇಶಿಸಿದೆಯೇ ?

ಇ) ಹಾಗಿದ್ದಲ್ಲಿ ಇವುಗಳ ಬಗ್ಗೆ ಸರ್ಕಾರವು ತೆಗೆದುಕೊಳ್ಳುವ ಕ್ರಮಗಳೇನು ?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣ ಅಭಿವೃದ್ಧಿ, ಪಂಚಾಯತ್ ರಾಜ್ ಮತ್ತು ವಾರ್ತಾ ಸಚಿವರು).—

ಅ) ಇಲ್ಲ.

ಆ) ಇಲ್ಲ.

ಇ) ಉದ್ಭವಿಸುವುದಿಲ್ಲ.

ತಿರುವನಂತಪುರದ ಹ್ಯಾಂಡ್ ಟ್ರಿಪಂ ಮೈಕ್ರೋ ಸರ್ಜಿಕಲ್ ರೀಪ್ಲಾಂಟೇಶನ್ ಯೂನಿಟ್ ಬಗ್ಗೆ

೬೧೩. ಶ್ರೀ ಬಿ. ರಮಾನಾಥ ರೈ (ಬಂಟ್ವಾಳ್, ದ.ಕ).—ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಆಂಧ್ರಪ್ರದೇಶದ ಹೈದರಾಬಾದ್ ತಮಿಳುನಾಡಿನ ಮದ್ರಾಸ್ ಕೇರಳದ ತಿರುವನಂತಪುರದಲ್ಲಿರುವ ಹ್ಯಾಂಡ್‌ಟ್ರಾಮ್ ಮೈಕ್ರೋ ಸರ್ಜಿಕಲ್ ರಿಪ್ಲೇಂಟೇಶನ್ ಯೂನಿಟ್ ಇದನ್ನು ಕರ್ನಾಟಕ ಬೆಂಗಳೂರಿನಲ್ಲಿ ಪ್ರಾರಂಭಿಸುವ ಉದ್ದೇಶ ಸರ್ಕಾರಕ್ಕಿದೆಯೇ ?

ಆ) ಹಾಗಿದ್ದಲ್ಲಿ ಈ ಒಂದು ಘಟಕವನ್ನು ಪ್ರಾರಂಭಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ?

ಶ್ರೀಮತಿ ಮನೋರಮಾ ಮಾಧ್ವರಾಜ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು).—

ಅ) ಇಲ್ಲಾ

ಆ) ಉದ್ಭವಿಸುವುದಿಲ್ಲ.

ಸರ್ಕಾರಿ ಆಸ್ಪತ್ರೆಗಳಲ್ಲಿ ವಿದ್ಯುತ್ ಜನರೇಟರ್‌ಗಳನ್ನು ಅಳವಡಿಸುವ ಬಗ್ಗೆ

೫೩೪. ಶ್ರೀ ಎಂ. ನಾರಾಯಣಸ್ವಾಮಿ (ಬೇತಮಂಗಲ) —ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬೆಂಗಳೂರು ನಗರದಲ್ಲಿರುವ ಸರ್ಕಾರಿ ಆಸ್ಪತ್ರೆಗಳ ಸಂಖ್ಯೆ ಎಷ್ಟು ?

ಆ) ಈ ಆಸ್ಪತ್ರೆಗಳ ಪೈಕಿ ಎಷ್ಟು ಆಸ್ಪತ್ರೆಗಳಲ್ಲಿ ಜನರೇಟರ್ ವ್ಯವಸ್ಥೆ ಇದೆ ?

ಇ) ಇಲ್ಲದಿದ್ದರೆ ಸರ್ಕಾರಿ ಆಸ್ಪತ್ರೆಗಳಲ್ಲಿ ಆಪರೇಷನ್‌ಗಳ ನಿಮಿತ್ತದಲ್ಲಿ ವಿದ್ಯುತ್ ನಿಲುಗಡೆಯಾಗುತ್ತಿರುವುದರಿಂದ ರೋಗಿಗಳಿಗೆ ಪೆಟ್ಟಿನ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ?

ಈ) ಹಾಗಿದ್ದಲ್ಲಿ ಸರ್ಕಾರವು ಕೂಡಲೇ ಬೆಂಗಳೂರಿನಲ್ಲಿರುವ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಜನರೇಟರ್ ಸ್ಥಾಪಿಸಲು ಕ್ರಮ ಕೈಗೊಳ್ಳುತ್ತಿದೆಯೇ ?